<u>**ಕರ್ನಾಟಕ ವಿಧಾನ ಪರಿಷತ್ತು**</u>

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 237
2. ಸದಸ್ಯರ ಹೆಸರು : ಶ್ರೀಮತಿ ಬಲ್ಕೀಸ್ ಬಾನು (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 16.07.2024
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಶಿವಮೊಗ್ಗದಲ್ಲಿ ವಿಮಾನ ನಿಲ್ದಾಣ ನಿರ್ಮಿಸಲು ಸರ್ಕಾರ ನೀಡಿರುವ ಒಟ್ಟು ಜಾಗವೆಷ್ಟು; | ಶಿವಮೊಗ್ಗ ವಿಮಾನ ನಿಲ್ದಾಣದ ಅಭಿವೃದ್ಧಿಗೆ ಒಟ್ಟು 758.07 ಎಕರೆ ಜಮೀನನ್ನು ಸರ್ಕಾರವು ಭೂಸ್ವಾಧೀನಪಡಿಸಿಕೊಳ್ಳಲಾಗಿದೆ. |
| (ಆ) | ವಿಮಾನ ನಿಲ್ದಾಣ ನಿರ್ಮಿಸಲು ಜಾಗವನ್ನು ನೀಡಿದ ರೈತರಿಗೆ ಅಥವಾ ಅವರ ಅವಲಂಬಿತ ಕುಟುಂಬಗಳಿಗೆ ನೀಡಲಾದ ಪರಿಹಾರ ಮೊತ್ತವೆಷ್ಟು? | ಶಿವಮೊಗ್ಗ ವಿಮಾನ ನಿಲ್ದಾಣ ನಿರ್ಮಿಸಲು ಕೆಐಎಡಿಬಿ ವತಿಯಿಂದ ಒಟ್ಟು 171-32 ಎಕರೆ ಖಾಸಗಿ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದ್ದು, ಇದಕ್ಕಾಗಿ ಒಟ್ಟು ಮೊತ್ತ ರೂ.17,61,51,557/-ಗಳ ಪರಿಹಾರವನ್ನು ಭೂ ಮಾಲಿಕರಿಗೆ ಪಾವತಿ ಮಾಡಲಾಗಿರುತ್ತದೆ. |
| (ಇ) | ಈ ಕುಟುಂಬದ ಎಷ್ಟು ಜನರಿಗೆ ಉದ್ಯೋಗ ನೀಡಲಾಗಿದೆ; ನೀಡದಿದ್ದಲ್ಲಿ, ಕಾರಣಗಳೇನು; ಈ ಬಗ್ಗೆ ಸರ್ಕಾರದ ನಿಲುವೇನು; | ಯಾವುದೇ ಉದ್ಯೋಗ ನೀಡಿರುವುದಿಲ್ಲ. |
| (ಈ) | ಸರ್ಕಾರ ನೀಡಿರುವ ಜಾಗದಲ್ಲಿ ಸಂಪೂರ್ಣವಾಗಿ ಎಷ್ಟು ಬಳಕೆ ಮಾಡಲಾಗಿದೆ; ಬಳಕೆಯಾಗದೇ ಬಾಕಿ ಉಳಿದಿರುವ ಜಾಗವೆಷ್ಟು; | ಸರ್ಕಾರವು ಶಿವಮೊಗ್ಗ ವಿಮಾನ ನಿಲ್ದಾಣದ ಅಭಿವೃದ್ಧಿಗೆ ನೀಡಿರುವ ಒಟ್ಟು 758 ಎಕರೆ 07 ಗುಂಟೆ ಜಮೀನುಗಳನ್ನು ಪೂರ್ಣ ಪ್ರಮಾಣದಲ್ಲಿ ಉಪಯೋಗಿಸಿಕೊಳ್ಳಲಾಗಿದೆ. |
| (ಉ) | ಬಾಕಿ ಉಳಿದಿರುವ ಜಾಗವನ್ನು ಸ್ವಾಧೀನಪಡಿಸಿಕೊಂಡು ಅದನ್ನು ಯಾವುದಾರೂ ಸಾರ್ವಜನಿಕ ಉದ್ದೇಶಗಳಿಗಾಗಿ ಬಳಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; ಇದ್ದರೆ, ಈ ಬಗ್ಗೆ ಯಾವ ಕಾಲಮಿತಿಯೊಳಗೆ ಸರ್ಕಾರ ಕ್ರಮ ಕೈಗೊಳ್ಳುವುದು? (ಸಂಪೂರ್ಣವಾದ ಮಾಹಿತಿ ನೀಡುವುದು) | ಅನ್ವಯಿಸುವುದಿಲ್ಲ. |

ಸಂಖ್ಯೆ: ಮೂಅಇ 111 ರಾಅವಿ 2024

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು